Kerala Gazette No. 31 dated 4th August 2020.

**PART I** **Section iii**

# ಕೇರಳ ಸರಕಾರ

## ಕಾನೂನು (ಶಾಸನ ರಚನೆ-ಜಿ) ಇಲಾಖೆ

## ಅಧಿಸೂಚನೆ

ನಂಬ್ರ. 23029/ಲೆಗ್. ಜಿ2/2017/ಕಾನೂನು. *ತಿರುವನಂತಪುರಂ,* *2018 ಏಪ್ರಿಲ್ 7,*
*1193 ಮೀನ 24/*
*1940 ಚೈತ್ರ 17.*

2018 ಏಪ್ರಿಲ್ 7ನೇ ದಿನಾಂಕದಂದು ಕೇರಳ ರಾಜ್ಯಪಾಲರು ಪ್ರಖ್ಯಾಪಿಸಿದಂತಹ ಈ ಕೆಳಗಿನ ಅಧ್ಯಾದೇಶವನ್ನು ಸಾರ್ವಜನಿಕರ ತಿಳುವಳಿಕೆಗಾಗಿ ಈ ಮೂಲಕ ಪ್ರಕಟಿಸಲಾಗುವುದು.

ರಾಜ್ಯಪಾಲರ ಆಜ್ಞಾಪ್ರಕಾರ,

**ಬಿ. ಜಿ. ಹರೀಂದ್ರನಾಥ್,**

*ಕಾನೂನು ಕಾರ್ಯದರ್ಶಿ.*

## 2018ರ 24ನೇ ನಂಬ್ರ ಅಧ್ಯಾದೇಶ

## 2018ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧ್ಯಾದೇಶ

ಭಾರತ ಗಣರಾಜ್ಯದ ಅರುವತ್ತೊಂಭತ್ತನೇ ವರ್ಷದಲ್ಲಿ ಕೇರಳ ರಾಜ್ಯಪಾಲರು ಪ್ರಖ್ಯಾಪಿಸಿದುದು.

1994ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮವನ್ನು ಮತ್ತಷ್ಟು ತಿದ್ದುಪಡಿಮಾಡುವುದಕ್ಕಿರುವ

ಒಂದು

ಅಧ್ಯಾದೇಶ

ಪೀಠಿಕೆ.—2017ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧ್ಯಾದೇಶ (2017ರ 26)ವನ್ನು 2017 ಡಿಸೆಂಬರ್ 1ನೇ ದಿನಾಂಕದಂದು ಕೇರಳ ರಾಜ್ಯಪಾಲರು ಪ್ರಖ್ಯಾಪಿಸಿದುದರಿಂದಲೂ;

2018 ಜನವರಿ 22ನೇ ದಿನಾಂಕದಂದು ಆರಂಭವಾಗಿ 2018 ಫೆಬ್ರವರಿ 7ನೇ ದಿನಾಂಕದಂದು ಮುಕ್ತಾಯಗೊಂಡ ಕೇರಳ ವಿಧಾನಸಭೆಯ ಅಧಿವೇಶನ ಕಾಲದಲ್ಲಿ ಪ್ರಸ್ತುತ ಅಧ್ಯಾದೇಶಕ್ಕೆ ಬದಲಾಗಿ ವಿಧಾನಸಭೆಯ ಒಂದು ಅಧಿನಿಯಮವನ್ನು ತರುವುದಕ್ಕಿರುವ ಒಂದು ಮಸೂದೆಯನ್ನು 14ನೇ ಕೇರಳ ವಿಧಾನಸಭೆಯ 102ನೇ ನಂಬ್ರ ಮಸೂದೆಯಾಗಿ ಪ್ರಕಟಿಸಿದ್ದರೂ, ಅದನ್ನು ವಿಧಾನಸಭೆಯಲ್ಲಿ ಮಂಡಿಸಲು ಹಾಗೂ ಅಂಗೀಕರಿಸಲು ಸಾಧ್ಯವಾಗದುದರಿಂದಲೂ;

ಪ್ರಸ್ತುತ ಅಧ್ಯಾದೇಶದ ಉಪಬಂಧಗಳನ್ನು ಚಾಲ್ತಿಯಲ್ಲಿರಿಸುವುದಕ್ಕಾಗಿ 2018ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧ್ಯಾದೇಶ (2018ರ 17)ವನ್ನು 2018 ಫೆಬ್ರವರಿ 12ನೇ ದಿನಾಂಕದಂದು ಕೇರಳ ರಾಜ್ಯಪಾಲರು ಪ್ರಖ್ಯಾಪಿಸಿದುದರಿಂದಲೂ;

2018 ಫೆಬ್ರವರಿ 26ನೇ ದಿನಾಂಕದಂದು ಆರಂಭವಾಗಿ 2018 ಏಪ್ರಿಲ್ 4ನೇ ದಿನಾಂಕದಂದು ಮುಕ್ತಾಯಗೊಂಡ ಕೇರಳ ವಿಧಾನಸಭೆಯ ಅಧಿವೇಶನ ಕಾಲದಲ್ಲಿ ಪ್ರಸ್ತುತ ಅಧ್ಯಾದೇಶಕ್ಕೆ ಬದಲಾಗಿ ವಿಧಾನಸಭೆಯ ಒಂದು ಅಧಿನಿಯಮವನ್ನು ತರುವುದಕ್ಕಿರುವ ಒಂದು ಮಸೂದೆಯನ್ನು 14ನೇ ಕೇರಳ ವಿಧಾನಸಭೆಯ 114ನೇ ನಂಬ್ರ ಮಸೂದೆಯಾಗಿ ಪ್ರಕಟಿಸಿದ್ದರೂ, ಅದನ್ನು ವಿಧಾನಸಭೆಯಲ್ಲಿ ಮಂಡಿಸಲು ಹಾಗೂ ಅಂಗೀಕರಿಸಲು ಸಾಧ್ಯವಾಗದುದರಿಂದಲೂ;

ಭಾರತ ಸಂವಿಧಾನದ 213ನೇ ಅನುಚ್ಛೇದದ (2)ನೇ ಖಂಡದ (ಎ) ಉಪ-ಖಂಡದ ಪ್ರಕಾರ 2018ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧ್ಯಾದೇಶ (2018ರ 17)ವು 2018 ಏಪ್ರಿಲ್ 9ನೇ ದಿನಾಂಕದಂದು ಜಾರಿಯಲ್ಲಿಲ್ಲದಾಗುವುದರಿಂದಲೂ;

ಪ್ರಸ್ತುತ ಅಧ್ಯಾದೇಶದ ಉಪಬಂಧಗಳನ್ನು ಚಾಲ್ತಿಯಲ್ಲಿರಿಸದಿದ್ದಲ್ಲಿ ತೊಂದರೆಗಳು ಉಂಟಾಗಬಹುದಾದುದರಿಂದಲೂ;

ಕೇರಳ ರಾಜ್ಯ ವಿಧಾನಸಭೆಯು ಅಧಿವೇಶನದಲ್ಲಿಲ್ಲದಿರುವುದರಿಂದಲು ಮತ್ತು ತಾನು ತ್ವರಿತ ಕ್ರಮವನ್ನು ಕೈಗೊಳ್ಳಲು ಅಗತ್ಯವಾದ ಸನ್ನಿವೇಶವು ಅಸ್ತಿತ್ವದಲ್ಲಿದೆಯೆಂದು ಕೇರಳ ರಾಜ್ಯಪಾಲರಿಗೆ ಮನವರಿಕೆಯಾಗಿರುವುದರಿಂದಲೂ;

ಈಗ, ಆದುದರಿಂದ, ಭಾರತ ಸಂವಿಧಾನದ 213ನೇ ಅನುಚ್ಛೇದದ ಖಂಡ (1)ರ ಪ್ರಕಾರ ನೀಡಲ್ಪಟ್ಟ ಅಧಿಕಾರಗಳನ್ನು ವಿನಿಯೋಗಿಸಿ, ಕೇರಳ ರಾಜ್ಯಪಾಲರು ಈ ಕೆಳಗಿನ ಅಧ್ಯಾದೇಶವನ್ನು ಪ್ರಖ್ಯಾಪಿಸಲು ಇಚ್ಛಿಸುವರು:—

1. <u>ಸಣ್ಣ ಹೆಸರು ಮತ್ತು ಪ್ರಾರಂಭ.</u>—(1) ಈ ಅಧ್ಯಾದೇಶವನ್ನು 2018ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧ್ಯಾದೇಶವೆಂದು ಕರೆಯಬಹುದು.

(2) ಇದು 2017 ಡಿಸಂಬರ್ 1ನೇ ದಿನಾಂಕದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. <u>ತಾತ್ಕಾಲಿಕವಾಗಿ ತಿದ್ದುಪಡಿ ಮಾಡಬೇಕಾದ 1994ರ 5ನೇ ಅಧಿನಿಯಮ.</u>—ಈ ಅಧ್ಯಾದೇಶವು ಜಾರಿಯಲ್ಲಿರುವ ಕಾಲಾವಧಿಯಲ್ಲಿ, 1994ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮ (1994ರ 5) (ಇನ್ನು ಮುಂದೆ ಪ್ರಧಾನ ಅಧಿನಿಯಮವೆಂದು ಉಲ್ಲೇಖಿಸಲ್ಪಡುವುದು)ಕ್ಕೆ 3ನೇ ವಿಭಾಗದಲ್ಲಿ ನಿರ್ದಿಷ್ಟಪಡಿಸಿರುವ ತಿದ್ದುಪಡಿಗಳಿಗೆ ವಿಧೇಯವಾಗಿ ಪ್ರಾಬಲ್ಯವಿರುವುದಾಗಿದೆ.

3. <u>31ನೇ ವಿಭಾಗಕ್ಕಿರುವ ತಿದ್ದುಪಡಿ.</u>—ಪ್ರಧಾನ ಅಧಿನಿಯಮದ 31ನೇ ವಿಭಾಗದ (3)ನೇ ಉಪ-ವಿಭಾಗದ ಬದಲು ಈ ಕೆಳಗಿನ ಉಪ-ವಿಭಾಗವನ್ನು ಸೇರಿಸತಕ್ಕದ್ದು, ಅದೇನೆಂದರೆ:—

"(3) ವಿಶ್ವವಿದ್ಯಾಲಯದ ಅಧ್ಯಾಪಕರ ನಿವೃತ್ತಿ ಪ್ರಾಯವು,—

(ಎ) ವಿಶ್ವವಿದ್ಯಾಲಯ ಅನುದಾನ ಆಯೋಗದ ರೆಗ್ಯುಲೇಶನ್ ಪ್ರಕಾರದ ಅರ್ಹತೆ ಹೊಂದಿದ ಅಧ್ಯಾಪಕರಿಗೆ ಅರುವತ್ತು ವರ್ಷ ಹಾಗೂ ಅಂತಹ ಒಬ್ಬ ಅಧ್ಯಾಪಕನ ನಿವೃತ್ತಿ ದಿನಾಂಕವು ಶೈಕ್ಷಣಿಕ ವರ್ಷದಲ್ಲಿ ಒಳಪಡುವುದಾದರೆ ಆತನು ಆ ಶೈಕ್ಷಣಿಕ ವರ್ಷವು ಮುಗಿಯುವ ವರೆಗೆ ಸೇವೆಯಲ್ಲಿ ಮುಂದುವರಿಯತಕ್ಕದ್ದಾಗಿದೆ. ಅಂತಹ ಅಧ್ಯಾಪಕರ ಸೇವಾ ಅನುಕೂಲತೆಗಳು ಕೇರಳ ಸೇವಾ ನಿಯಮಗಳ ಭಾಗ 1ರ 60ನೇ ನಿಯಮದ ಉಪ-ನಿಯಮ (ಸಿ) ಅನುಸರಿಸಿ ಆಗಿರತಕ್ಕದ್ದು; ಹಾಗೂ

(ಬಿ) ವಿಶ್ವವಿದ್ಯಾಲಯದ (ಎ) ಖಂಡದಲ್ಲಿ ಒಳಪಡದ ಅಧ್ಯಾಪಕರ ಹಾಗೂ ಅಧ್ಯಾಪಕೇತರ ಸಿಬ್ಬಂದಿಗಳ, ಅಧಿಕಾರಿಗಳ ಮತ್ತು ಇತರ ನೌಕರರ ವಿಷಯದಲ್ಲಿ, ಸರಕಾರವು ಕಾಲಕಾಲದಲ್ಲಿ ಸರಕಾರಿ ಸೇವೆಯಲ್ಲಿರುವ ನೌಕರರ ನಿವೃತ್ತಿ ಪ್ರಾಯವನ್ನು ನಿರ್ಧರಿಸಬಹುದಾದಂತೆ ಅನ್ವಯವಾಗುವುದಾಗಿದೆ:

ಆದರೆ, ಅಲ್ಪಾವಧಿ ಕರಾರಿನ ಪ್ರಕಾರ ಮೂರು ವರ್ಷಕ್ಕಿಂತ ಮೀರದ ಕಾಲಾವಧಿಗೆ ತಾತ್ಕಾಲಿಕವಾಗಿ ನೇಮಿಸಲ್ಪಡುವ ಯಾವುದೇ ವ್ಯಕ್ತಿಯ ವಿಷಯದಲ್ಲಿ, ಈ ಉಪ-ವಿಭಾಗದಲ್ಲಿ ಹೇಳಿದಂತಹ ಪ್ರಾಯ ಮಿತಿಯು ಅನ್ವಯಿಸುವುದಲ್ಲ:

ಮತ್ತೂ ಅಲ್ಲದೆ, ಅಲ್ಪಾವಧಿ ಕರಾರಿನ ಪ್ರಕಾರದ ನೇಮಕಾತಿಯು ಶಾಸನಗಳಲ್ಲಿ ನಿಗದಿಪಡಿಸಿದ ರೀತಿಯಲ್ಲಿ ರಚಿಸಲ್ಪಟ್ಟ ಸೆಲೆಕ್ಷನ್ ಕಮಿಟಿಯ ಅಂಗೀಕಾರ ಅನುಸರಿಸಿ ಆಗಿರತಕ್ಕದ್ದು.”.

4. ರದ್ಧತಿ ಮತ್ತು ರಕ್ಷಣೆ.—(1) 2018ರ ಶ್ರೀ ಶಂಕರಾಚಾರ್ಯ ಸಂಸ್ಕೃತ ವಿಶ್ವವಿದ್ಯಾಲಯ (ತಿದ್ದುಪಡಿ) ಅಧ್ಯಾದೇಶ (2018ರ 17)ವು ಈ ಮೂಲಕ ರದ್ದುಗೊಂಡಿರುವುದು.

(2) ಅಂತಹ ರದ್ಧತಿಯಲ್ಲಿ ಏನೇ ಒಳಗೊಂಡಿದ್ದರೂ, ಪ್ರಸ್ತುತ ಅಧ್ಯಾದೇಶದ ಪ್ರಕಾರ ತಿದ್ದುಪಡಿಮಾಡಲ್ಪಟ್ಟ ಪ್ರಧಾನ ಅಧಿನಿಯಮದ ಪ್ರಕಾರ ಮಾಡಿದ ಅಥವಾ ಮಾಡಿರುವುದಾಗಿ ಭಾವಿಸಲ್ಪಡುವ ಯಾವುದೇ ಕಾರ್ಯ ಅಥವಾ ಕೈಗೊಂಡ ಅಥವಾ ಕೈಗೊಂಡಿರುವುದಾಗಿ ಭಾವಿಸಲ್ಪಡುವ ಯಾವುದೇ ಕ್ರಮವು ಈ ಅಧ್ಯಾದೇಶದ ಪ್ರಕಾರ ತಿದ್ದುಪಡಿ ಮಾಡಲ್ಪಟ್ಟ ಪ್ರಧಾನ ಅಧಿನಿಯಮದ ಪ್ರಕಾರ ಮಾಡಿರುವುದಾಗಿ ಅಥವಾ ಕೈಗೊಂಡಿರುವುದಾಗಿ ಭಾವಿಸತಕ್ಕದ್ದು.

**ಪಿ. ಸದಾಶಿವಮ್,**

ರಾಜ್ಯಪಾಲರು.